# Songs for Classes – 1 & 2

## ಹಾಡು–೧

ಶರಣೆಂಬೆ ವಾಣಿ ಪೊರೆಯೇ ಕಲ್ಯಾಣಿ ॥ಪ॥

ವಾಗಾಭಿಮಾನಿ ವರ ಬ್ರಹ್ಮಾಣಿ। ಸುಂದರ
ವೇಣಿ ಸುಚರಿತ್ರಾಣಿ॥

ಜಗದೊಳು ನಿಮ್ಮ ಪೊಗಳುವೆ ನಮ್ಮ ।
ಹರಿಯ ತೋರಿಸೆಂದು ಪ್ರಾರ್ಥಿಪೆನಮ್ಮ॥೧॥

ಪಾಡುವೆ ಶ್ರುತಿಯ ಬೇಡುವೆ ಮತಿಯ ।
ಪುರಂದರ ವಿಠಲನ ಸೋದರ ಸೊಸೆಯ॥೨।

## ಹಾಡು–೨

ಪಾರ್ವತಿ ವರಸುತ ಗಜಾನನ। ಪಾಲಿಸು
ಎನ್ನನು ಗಜಾನನ

ಲಂಬೋದರನೆ ನಂಬಿದೆ ನಿನ್ನನು ।ಕೈ
ಬಿಡಬೇಡವೊ ಗಜಾನನ॥೧॥

ಪಾಶಾಂಕುಶಧರ ಪಾಪವಿಮೋಚನ।
ಪಾಲಿಸೋ ಎನ್ನನು ಗಜಾನನ॥೨॥

ಗುರು ರಂಗ ವಿಠಲನ ಸ್ಮರಣೆಯ
ಮಾಡುವ।ನಿರುತ ಸುಖವಕೊಡು ಗಜಾನನ

## ಹಾಡು–೩

॥ ಗಣೇಶ ಸ್ತುತಿ ॥
ಫಲದಾಯಕ ನೀನೆ । ವಿನಾಯಕ ॥ಪ॥
ನೀ ಫಲದಾಯಕ ನೀನೆ । ವಿನಾಯಕ ॥ಅ.ಪ॥

ಭಜನಾರಂಭದಿ । ಭಜಿಸುವೆ ನಿನ್ನನು ।
ಭಜನೆ ಸಿದ್ಧಿಪುದೆಮಗೆ । ವಿನಾಯಕ ॥೧॥

ಕಾರ್ಯಾರಂಭದಿ | ಭಜಿಸುವೆ ನಿನ್ನನು |
ಕಾರ್ಯ ಸಿದ್ಧಿಪುದೆಮಗೆ | ವಿನಾಯಕ ||೨||

ವಿದ್ಯಾರಂಭದಿ | ಭಜಿಸುವೆ ನಿನ್ನನು |
ವಿದ್ಯೆ ಸಿದ್ಧಿಪುದೆಮಗೆ | ವಿನಾಯಕ ||೩|

## ಹಾಡು–೪

ಗಣಪತಿ ಎನ್ನ ಪಾಲಿಸೊ ಗಂಭೀರ

ಪಾರ್ವತಿ ನಂದನ ಸುಂದರ ವದನ
ಶರ್ವಾದಿ ಸುರಪ್ರಿಯ ಶಿರ ಬಾಗುವೆನಾ॥೧॥

ಆದಿ ಪೂಜಿತ ನೀನು ಮೋದ ಭಕ್ತರಿಗಿತ್ತು
ಮಾಧವನಲಿ ಮನ ಸದಾ ನಿಲ್ಲಿಸು ನೀ॥೨॥

ಪಂಕಜ ನಯನಶ್ರೀ ವೇಂಕತ ವಿಠಲನ
ಕಿಂಕರನೆನಿಸೆನ್ನ ಶಂಕರ ತನಯನೆ॥೩॥

# Songs for classes III –VII

**NOTE: Students are asked to take printouts of all songs given**

**ಹಾಡು – ೧**

ಸಧ್ದಿರದ ಪಸುರುಡೆಯ ಮಲೆನಾಡ
ಬನಗಳಲಿ
ಮೊರೆವ ತೊರೆಯೆಡೆಯಲ್ಲಿ
ಗುಡಿಸಲೊಂದಿರಲಿ.
ಅಲ್ಲಿ ಗಿಳಿ ಗೊರವಂಕ ಕೋಗಿಲೆಗಳಿಂಚರವು
ಕಲೆಯುತಲೆಯಲೆಯಾಗಿ ತೇಲಿ ಬರುತಿರಲಿ.

ಅಲ್ಲಿ ಬಳಿ ಪಸಲೆಯಲಿ ದನಗಳಂಬಾ ಎಂಬ
ದನಿಯು ದನ ಕಾಯುವನ ಕೊಳಲೊಡನೆ
ಬರಲಿ.
ಅಲ್ಲಿ ಸಿರಿಗನ್ನಡದ ಕಬ್ಬಗಳ ಹಬ್ಬಗಳು
ದಿನ ದಿನವು ಸವಿಯೂಟವಿಕ್ಕುತಿರಲೆನಗೆ
ಬಾಂದಳದಿ ಹಾರಿದರು ಬುವಿಯಲ್ಲಿ
ಜಾರುತಿಹ
ರಸಿಕನಾಗಿಹನೊಬ್ಬ ಗೆಳೆಯನಿರಲೆನಗೆ .
ಬೈಗಾಗೆ ನಮ್ಮೊಡನೆ ಗಳಪಿಯಲೆದಡ್ಡಾಡೆ
ಗೋಪಾಲನಾಗಿರುವ ತಿಮ್ಮನೆನಗಿರಲಿ!
ಮೇಲೆ ಬಾಳನು ಬಿಟ್ಟು ನಾನಳಿದು
ಮರೆಯಾಗೆ
ನನ್ನಾಸೆ ಏನೆಂದು ಎಲ್ಲರರಿತಿರಲಿ:
ಸಗ್ಗವಿವನೊಳಗೊಂಡಿರಲು ಸಗ್ಗವೆನಗಿರಲಿ;
ನರಕವಿವನೊಳಗೊಂಡಿರಲು ನರಕವಿರಲಿ

**ಹಾಡು – ೨**

**ನೇಗಿಲ ಹಿಡಿದಾ ಹೊಲದೊಳು ಹಾಡುತ**
ಉಳುವಾ ಯೋಗಿಯ ನೋಡಲ್ಲಿ
ಫಲವನು ಬಯಸದ ಸೇವೆಯೆ ಪೂಜೆಯು
ಕರ್ಮವೆ ಇಹಪರ ಸಾಧನವು
ಕಷ್ಟದೊಳನ್ನವ ದುಡಿವನೆ ತ್ಯಾಗಿ
ಶೃಷ್ಟಿನಿಯಮದೊಳಗವನೇ ಭೋಗಿ
ಉಳುವ ಯೋಗಿಯ ನೋಡಲ್ಲಿ ।।೨।।

ಲೋಕದೊಳೇನೇ ನಡೆಯುತಲಿರಲಿ
ತನ್ನೀ ಕಾರ್ಯವ ಬಿಡನೆಂದೂ
ರಾಜ್ಯಗಳುದಿಸಲಿ ರಾಜ್ಯಗಳಳಿಯಲಿ,
ಹಾರಲಿ ಗದ್ದುಗೆ ಮುಕುಟಗಳು
ಮುತ್ತಿಗೆ ಹಾಕಲಿ ಸೈನಿಕರೆಲ್ಲ ।।೨।।
ಬಿತ್ತುಳುವುದನವ ಬಿಡುವುದೆ ಇಲ್ಲ ।।೨।।
ಉಳುವಾ ಯೋಗಿಯ ನೋಡಲ್ಲಿ

ಯಾರು ಅರಿಯದ ನೇಗಿಲ ಯೋಗಿಯೆ
ಲೋಕಕೆ ಅನ್ನವನೀಯುವನು ।।೨।।
ಹೆಸರು ಬಯಸದೆ ಅತಿ ಸುಖಕೆಳಸದೆ
ದುಡಿವನು ಗೌರವಕಾಶಿಸದೆ
ನೇಗಿಲಕುಳದೊಳಗಡಗಿದೆ ಕರ್ಮ
ನೇಗಿಲ ಮೇಲೆ ನಿಂತಿದೆ ಧರ್ಮ
ಉಳುವಾ ಯೋಗಿಯ ನೋಡಲ್ಲಿ ।।೩।।

**ಹಾಡು – ೩**

ಬಾ ಇಲ್ಲಿ ಸಂಭವಿಸು ಇಂದೆನ್ನ ಹೃದಯದಲಿ

ನಿತ್ಯವೂ ಅವತರಿಪ ಸತ್ಯಾವತಾರ
ಬಾ ಇಲ್ಲಿ ಸಂಭವಿಸು ಇಂದೆನ್ನ ಹೃದಯದಲಿ
ನಿತ್ಯವೂ ಅವತರಿಪ ಸತ್ಯಾವತಾರ

ಮಣ್ಣಾಗಿ ಮರವಾಗಿ ಮಿಗವಾಗಿ ಖಗವಾಗಿ

ಮಣ್ಣಾಗಿ ಮರವಾಗಿ ಮಿಗವಾಗಿ ಖಗವಾಗಿ
ಭವಭವದಿ ಭವಿಸಿ ಹೇ
ಭವವಿದೂರ.
ನಿತ್ಯವೂ ಅವತರಿಪ ಸತ್ಯಾವತಾರ
ನಿತ್ಯವೂ ಅವತರಿಪ ಸತ್ಯಾವತಾರ

ಬಾ ಇಲ್ಲಿ ಸಂಭವಿಸು ಇಂದೆನ್ನ ಹೃದಯದಲಿ

ನಿತ್ಯವೂ ಅವತರಿಪ ಸತ್ಯಾವತಾರ
ಬಾ ಇಲ್ಲಿ ಸಂಭವಿಸು ಇಂದೆನ್ನ ಹೃದಯದಲಿ
ನಿತ್ಯವೂ ಅವತರಿಪ ಸತ್ಯಾವತಾರ

ಮಣ್ತನಕೆ ಮರತನಕೆ ಮಿಗತನಕೆ ಖಗತನಕೆ
ಮಣ್ತನಕೆ ಮರತನಕೆ ಮಿಗತನಕೆ ಖಗತನಕೆ
ಮುನ್ನಡೆಗೆ ಕಣ್ಣಾದ ಗುರುವೆ, ಬಾರ!
ಮೂಡಿ ಬಂದೆನ್ನ ನರರೂಪ ಚೇತನದಿ
ಮೂಡಿ ಬಂದೆನ್ನ ನರರೂಪ ಚೇತನದಿ
ನಾರಾಯಣತ್ವಕ್ಕೆ ದಾರಿ ತೋರ!
ನಿತ್ಯವೂ ಅವತರಿಪ ಸತ್ಯಾವತಾರ
ನಿತ್ಯವೂ ಅವತರಿಪ ಸತ್ಯಾವತಾರ

ಬಾ ಇಲ್ಲಿ ಸಂಭವಿಸು
ನಿತ್ಯವೂ ಅವತರಿಪ ಸತ್ಯಾವತಾರ
ಬಾ ಇಲ್ಲಿ ಸಂಭವಿಸು ಇಂದೆನ್ನ ಹೃದಯದಲಿ
ನಿತ್ಯವೂ ಅವತರಿಪ ಸತ್ಯಾವತಾರ

ಅಂದು ಅರಮನೆಯಲ್ಲಿ, ಮತ್ತೆ ಸೆರೆಮನೆಯಲ್ಲಿ,
ಅಲ್ಲಿ ತುರುಪಟ್ಟಿಯಲಿ,ಇಲ್ಲಿ ಕಿರುಗುಡಿಸಲಲಿ,
ಅಂದು ಅರಮನೆಯಲ್ಲಿ, ಮತ್ತೆ ಸೆರೆಮನೆಯಲ್ಲಿ,
ಅಲ್ಲಿ ತುರುಪಟ್ಟಿಯಲಿ,ಇಲ್ಲಿ ಕಿರುಗುಡಿಸಲಲಿ,
ದೇಶದೇಶದಿ ವೇಷವೇಷಾಂತರವನಾಂತು
ವಿಶ್ವಸಾರಥಿಯಾಗಿ ಲೀಲಾರಥವನೆಂತು
ಚೋದಿಸಿರುವೆಯೊ ಅಂತೆ, ಸೃಷ್ಟಿಲೋಲ,
ಚೋದಿಸಿರುವೆಯೊ ಅಂತೆ, ಸೃಷ್ಟಿಲೋಲ,

ಅವತರಿಸು ಬಾ
ಅವತರಿಸು ಬಾ
ಅವತರಿಸು ಬಾ ಇಲ್ಲಿ ಇಂದೆನ್ನ ಚೈತ್ಯದಲಿ,
ಅವತರಿಸು ಬಾ ಇಲ್ಲಿ ಇಂದೆನ್ನ ಚೈತ್ಯದಲಿ,
ಹೇ ದಿವ್ಯ ಸಚ್ಚಿದಾನಂದ ಶೀಲ!
ಹೇ ದಿವ್ಯ ಸಚ್ಚಿದಾನಂದ ಶೀಲ!
ಹೇ ದಿವ್ಯ ಸಚ್ಚಿದಾನಂದ ಶೀಲ!

ಬಾ ಇಲ್ಲಿ ಸಂಭವಿಸು ಇಂದೆನ್ನ ಹೃದಯದಲಿ
ನಿತ್ಯವೂ ಅವತರಿಪ ಸತ್ಯಾವತಾರ
ಬಾ ಇಲ್ಲಿ ಸಂಭವಿಸು ಇಂದೆನ್ನ ಹೃದಯದಲಿ
ನಿತ್ಯವೂ ಅವತರಿಪ ಸತ್ಯಾವತಾರ
ಬಾ ಇಲ್ಲಿ ಸಂಭವಿಸು ಇಂದೆನ್ನ ಹೃದಯದಲಿ
ನಿತ್ಯವೂ ಅವತರಿಪ ಸತ್ಯಾವತಾರ
ಬಾ ಇಲ್ಲಿ ಸಂಭವಿಸು ಇಂದೆನ್ನ ಹೃದಯದಲಿ
ನಿತ್ಯವೂ ಅವತರಿಪ ಸತ್ಯಾವತಾರ
ನಿತ್ಯವೂ ಅವತರಿಪ ಸತ್ಯಾವತಾರ
-

**ಹಾಡು – ೪**

ಆನಂದಮಯ ಈ ಜಗ ಹೃದಯ, ಏತಕೆ
ಭಯ ಮಾಣೋ..
ಸೂರ್ಯೋದಯ ಚಂದ್ರೋದಯ, ದೇವರ
ದಯ ಕಾಣೋ…
ಆನಂದಮಯ ಈ ಜಗ ಹೃದಯ…

ಬಿಸಿಲಿದು ಬರಿ ಬಿಸಿಲಲ್ಲವೋ, ಸೂರ್ಯನ
ಕೃಪೆ ಕಾಣೋ.
ಸೂರ್ಯನು ಬರಿ ರವಿಯಲ್ಲವೋ, ಆ
ಭ್ರಾಂತಿಯ ಮಾಣೋ.
ಆನಂದಮಯ ಈ ಜಗ ಹೃದಯ…

ರವಿವದನವೇ ಶಿವಸದನವೋ, ಬರಿ ಕಣ್ಣದು
ಮಣ್ಣೋ.
ಶಿವನಿಲ್ಲದೆ ಸೌಂದರ್ಯವೇ, ಶವಮುಖದಾ
ಕಣ್ಣೋ.
ಆನಂದಮಯ ಈ ಜಗ ಹೃದಯ…

ಉದಯದೊಳೇನ್ ಹೃದಯವ ಕಾಣ್, ಅದೇ
ಅಮೃತದ ಹಣ್ಣೋ.
ಶಿವ ಕಾಣದೆ ಕವಿ ಕುರುಡನೋ, ಶಿವ
ಕಾವ್ಯದ ಕಣ್ಣೋ.
ಆನಂದಮಯ ಈ ಜಗಹೃದಯ…

- ಕುವೆಂಪು

**ಹಾಡು – ೫**

ಹಾಡು: ಬಾರಿಸು ಕನ್ನಡ ಡಿಂಡಿಮವ
ರಚನೆ: ಕುವೆಂಪು
ಗಾಯನ: ಶಿವಮೊಗ್ಗ ಸುಬ್ಬಣ್ಣ

ಬಾರಿಸು ಕನ್ನಡ ಡಿಂಡಿಮವ
ಓ ಕರ್ನಾಟಕ ಹೃದಯ ಶಿವ
ಬಾರಿಸು ಕನ್ನಡ ಡಿಂಡಿಮವ

ಸತ್ತಂತಿಹರನು ಬಡಿದೆಚ್ಚರಿಸು
ಕಚ್ಚಾಡುವರನು ಕೂಡಿಸಿ ಒಲಿಸು
ಹೊಟ್ಟೆಯ ಕಿಚ್ಚಿಗೆ ಕಣ್ಣೀರ್ ಸುರಿಸು
ಒಟ್ಟಿಗೆ ಬಾಳುವ ತೆರದಲಿ ಹರಸು

ಬಾರಿಸು ಕನ್ನಡ ಡಿಂಡಿಮವ ||

ಚೈತ ಶಿವೇತರ ಕೃತಿ ಕೃತಿಯಲ್ಲಿ
ಮೂಡಲಿ ಮಂಗಳ ಮತಿ ಮತಿಯಲ್ಲಿ
ಕವಿ ಋಷಿ ಸಂತರ ಆದರ್ಶದಲಿ
ಸರ್ವೋದಯವಾಗಲಿ ಸರ್ವರಲಿ

ಬಾರಿಸು ಕನ್ನಡ ಡಿಂಡಿಮವ ||

**ಹಾಡು – ೬**

ಶೀರ್ಷಿಕೆ : ಜಯ ಭಾರತ ಜನನಿಯ ತನುಜಾತೆ
ಕವಿ : ಕುವೆಂಪು
ಪ್ರಾಕಾರ : ನಾಡಗೀತೆ / ರಾಷ್ಟ್ರಭಕ್ತಿಗೀತೆ
ಭಾಷೆ : ಕನ್ನಡ

ಜಯ ಭಾರತ ಜನನಿಯ ತನುಜಾತೆ,
ಜಯ ಹೇ ಕರ್ನಾಟಕ ಮಾತೆ.
ಜಯ ಸುಂದರ ನದಿ ವನಗಳ ನಾಡೇ,
ಜಯ ಹೇ ರಸಋಷಿಗಳ ಬೀಡೆ.

ಭೂದೇವಿಯ ಮಕುಟದ ನವಮಣಿಯೆ,
ಗಂಧದ ಚಂದದ ಹೊನ್ನಿನ ಗಣಿಯೆ.
ರಾಘವ ಮಧುಸೂಧನರವತರಿಸಿದ
ಭಾರತ ಜನನಿಯ ತನುಜಾತೆ,
ಜಯ ಹೇ ಕರ್ನಾಟಕ ಮಾತೆ.

ಜನನಿಯ ಜೋಗುಳ ವೇದದ ಘೋಷ,
ಜನನಿಗೆ ಜೀವವು ನಿನ್ನಾವೇಶ.
ಹಸುರಿನ ಗಿರಿಗಳ ಸಾಲೇ,
ನಿನ್ನಯ ಕೊರಳಿನ ಮಾಲೆ.
ಕಪಿಲ ಪತಂಜಲ ಗೌತಮ ಜಿನನುತ
ಭಾರತ ಜನನಿಯ ತನುಜಾತೆ,
ಜಯ ಹೇ ಕರ್ನಾಟಕ ಮಾತೆ.

ಶಂಕರ ರಾಮಾನುಜ ವಿದ್ಯಾರಣ್ಯ,
ಬಸವೇಶ್ವರ ಮಧ್ವರ ದಿವ್ಯಾರಣ್ಯ.ರನ್ನ ಷಡಕ್ಷರಿ ಪೊನ್ನ,
ಪಂಪ ಲಕುಮಿಪತಿ ಜನ್ನ.
ಕುಮಾರವ್ಯಾಸರ ಮಂಗಳಧಾಮ,
ಕವಿಕೋಗಿಲೆಗಳ ಪುಣ್ಯಾರಾಮ.
ನಾನಕ ರಾಮಾನಂದ ಕಬೀರರ
ಭಾರತ ಜನನಿಯ ತನುಜಾತೆ,
ಜಯ ಹೇ ಕರ್ನಾಟಕ ಮಾತೆ.

ತೈಲಪ ಹೊಯ್ಸಳರಾಳಿದ ನಾಡೆ,
ಡಂಕಣ ಜಕಣರ ನೆಚ್ಚಿನ ಬೀಡೆ.
ಕೃಷ್ಣ ಶರಾವತಿ ತುಂಗಾ,
ಕಾವೇರಿಯ ವರ ರಂಗ.
ಚೈತನ್ಯ ಪರಮಹಂಸ ವಿವೇಕರ
ಭಾರತ ಜನನಿಯ ತನುಜಾತೆ,
ಜಯ ಹೇ ಕರ್ನಾಟಕ ಮಾತೆ.

ಸರ್ವಜನಾಂಗದ ಶಾಂತಿಯ ತೋಟ,
ರಸಿಕರ ಕಂಗಳ ಸೆಳೆಯುವ ನೋಟ.
ಹಿಂದೂ ಕ್ರೈಸ್ತ ಮುಸಲ್ಮಾನ,
ಪಾರಸಿಕ ಜೈನರುದ್ಯಾನ.
ಜನಕನ ಹೋಲುವ ದೊರೆಗಳ ಧಾಮ,
ಗಾಯಕ ವೈಣಿಕರಾರಾಮ.

ಕನ್ನಡ ನುಡಿ ಕುಣಿದಾಡುವ ಗೇಹ,
ಕನ್ನಡ ತಾಯಿಯ ಮಕ್ಕಳ ದೇಹ.
ಭಾರತ ಜನನಿಯ ತನುಜಾತೆ,
ಜಯ ಹೇ ಕರ್ನಾಟಕ ಮಾತೆ.
ಜಯ ಸುಂದರ ನದಿ ವನಗಳ ನಾಡೆ,
ಜಯ ಹೇ ರಸಋಷಿಗಳ ಬೀಡೆ.

**ಹಾಡು – ೭**

ಓ! ನನ್ನ ಚೇತನ
ಆಗು ನೀ ಅನಿಕೇತನ ||

ರೂಪ ರೂಪಗಳನು ದಾಟಿ
ನಾಮ ಕೋಟಿಗಳನು ಮೀಟಿ
ಎದೆಯ ಬಿರಿಯ ಭಾವದೀಟಿ

ನೂರು ಮತದ ಹೊಟ್ಟ ತೂರಿ
ಎಲ್ಲ ತತ್ವದೆಲ್ಲೆ ಮೀರಿ
ನಿರ್ದಿಗಂತವಾಗಿ ಏರಿ

ಎಲ್ಲಿಯೂ ನಿಲ್ಲದಿರು
ಮನೆಯನೆಂದು ಕಟ್ಟದಿರು
ಕೊನೆಯನೆಂದು ಮುಟ್ಟದಿರು
ಓ! ಅನಂತವಾಗಿರು

ಅನಂತ ತಾನ್ ಅನಂತವಾಗಿ
ಆಗುತಿಹನೆ ನಿತ್ಯಯೋಗಿ
ಅನಂತ ನೀ ಅನಂತವಾಗು
ಆಗು ಆಗು ಆಗು ಆಗು

**ಹಾಡು – ೮**

ಬಾ ಶ್ರೀಗುರುದೇವನೆ ಬಾ|

ಶ್ಯಾಮಲ ಕಾನನ ಶೃಂಗ ತರಂಗಿತ
ಸಹ್ಯಾದ್ರಿಯ ಸುಂದರ ಮಂದಿರಕೆ
ಚನ್ಮಯ ಮಮ ಹೃನ್ಮಂದಿರಕೆ||

ವಂಗಮಾತೆಯಲಿ ಜನ್ಮವನೆತ್ತಿ
ದಿವ್ಯಸಮನ್ವಯ ಧರ್ಮವ ಬಿತ್ತಿ
ಮತಭೇದದ ವಿಷವನು ಹೋಗಾಡಿ
ಲೋಕದ ದೃಷ್ಟಿಗೆ ಸಮತೆಯ ನೀಡಿ
ಕಾಪಾಡಿದ ಪಾವನ ಮೂರುತಿಯೇ||

ಮಿಂದಿದೆ ನವವರ್ಷದಿ ಮಲೆನಾಡು
ಹೊಸ ಸಿಂಗಾರದಿ ಮೆರೆದಿದೆ ಕಾಡು
ಕೋಗಿಲೆ ಕಾಜಾಣವು ಕಾಮಳ್ಳಿ
ಆಹ್ವಾನಿಸುತಿದೆಗಾನದೊಳಿಲ್ಲಿ
ಹೇ ನವಯುಗದವತಾರ ॥

ಪೂರ್ವದಿಗಂತದಿ ಕಾಂತಿಯು ಮೂಡಿ
ನಾಡಿನ ಕತ್ತಲೆಯನು ಹೋಗಾಡಿ
ಮೈದೋರುವ ತೆರದಲಿ ನೀನಿಂದು
ನಮ್ಮೀ ವನಗೃಹಕೈತಂದು
ನಮ್ಮೆದೆಗತ್ತಲ ಪರಿಹರಿಸಿ
ಸುಖಶಾಂತಿಯ ಕಾಂತಿಯ ಬರಿಸಿ
ಕೃಪೆಗೈ, ಓ ಮಮ ದೀನಬಂಧು||

—-ಕುವೆಂಪು

## ಹಾಡು– ೯

ಹಸುರು

ನವರಾತ್ರಿಯ ನವಧಾತ್ರಿಯ ಈ ಶ್ಯಾಮಲ
ವನಧಿಯಲಿ
ಹಸುರಾದುದೊ ಕವಿಯಾತ್ಮಂ ರಸಪಾನ ಸ್ನಾನದಲಿ

ಹಸುರಾಗಸ ಹಸುರು ಮುಗಿಲು
ಹಸುರುಗದ್ದೆಯಾ ಬಯಲು
ಹಸುರಿನ ಮಲೆ ಹಸುರು ಕಣಿವೆ
ಹಸುರು ಸಂಜೆ ಈ ಬಿಸಿಲು

ಆಶ್ವೀನದ ಶಾಲಿವನದ
ಗಿಳಿಯದೆ ಬಣ್ಣದ ನೋತ
ಅದರೆಡೆಯಲಿ ಬನದಂಚಲಿ
ಕೊನೆವೆತ್ತಡಕೆಯ ತೋಟ

ಅದೊ ಹುಲ್ಲಿನ ಮಕಮಲ್ಲಿನ
ಹೊಸಪಚ್ಚೆಯ ಜಮಖಾನೆ
ಪಸರಿಸಿ ತಿರೆ ಮೈ ಮುಚ್ಚಿರೆ
ಬೇರೆಬಣ್ಣವನೆ ಕಾಣೆ

ಹೊಸ ಹೂವಿನ ಕಂಪು ಹಸುರು
ಎಲರಿನ ತಂಪೂ ಹಸುರು
ಹಕ್ಕಿಯ ಕೊರಲಿಂಪು ಹಸುರು
ಹಸುರು ಹಸುರಿಳೆಯುಸಿರೂ

ಹಸುರತ್ತಲ್ ಹಸುರಿತ್ತಲ್
ಹಸುರೆತ್ತಲ್ ಕಡಲಿನಲಿ
ಹಸುರುಗಟ್ಟಿತೊ ಕವಿಯಾತ್ಮಂ
ಹಸುರ್ ನೆತ್ತರ್ ಒಡಲಿನಲಿ

## ಹಾಡು – ೧೦

ತನುವು ನಿನ್ನದು ಮನವು ನಿನ್ನದು
ಎನ್ನ ಜೀವನ ಧನವು ನಿನ್ನದು
ನಾನು ನಿನ್ನವನೆಂಬ ಹೆಮ್ಮೆಯ
ಋಣವು ಮಾತ್ರವೆ ನನ್ನದು

ನೀನು ಹೊಳೆದರೆ ನಾನು ಹೊಳೆವೆನು
ನೀನು ಬೆಳೆದರೆ ನಾನು ಬೆಳೆವೆನು
ನನ್ನ ಹರಣದ ಹರಣ ನೀನು
ನನ್ನ ಮರಣದ ಮರಣವು

ನನ್ನ ಮನದಲಿ ನೀನೆ ಯುಕ್ತಿ
ನನ್ನ ಹೃದಯದಿ ನೀನೆ ಭಕ್ತಿ
ನೀನೆ ಮಾಯಾ ಮೋಹ ಶಕ್ತಿಯು
ನನ್ನ ಜೀವನ ಮುಕ್ತಿಯು

## ಹಾಡು – ೧೧

ತೇನವಿನ ತೃಣಮಪಿ ನ ಚಲತಿ ತೇನವಿನ
ಮಮತೆಯ ಬಿಡು ಹೇ ಮೂಢ ಮನ॥

ರವಿಗಿಲ್ಲದ ಭಯ ಶಶಿಗಿಲ್ಲದ ಭಯ
ತಾರ ನಿವಹಕೆ ಇರದ ಭಯ
ನಿನಗೇತಕೆ ಬಿಡು ಅಣು ಶ್ರದ್ಧೆಯನಿಡು
ನಿನ್ನನೇ ನೈವೇದ್ಯವ ನೀಡು

ಎಲ್ಲೆಲ್ಲಿಯು ಕೈ ಎಲ್ಲೆಯು ಕಾಲ್
ಎಲ್ಲೆಯು ಕಣ್ ತಾನಾದ
ಸಚ್ಚಿತ್ ಶಕ್ತಿಯ ಆನಂದವಿರಲ್
ಬಿಡು ಏತಕೆ ನಿನಗೆ ಈ ವಿಷಾದ

– ಕುವೆಂಪು